ಇದ್ದು ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇದುವರೆವಿಗೂ ಖಾಲಿಇರುವ ಹುದ್ದೆಗಳನ್ನು ತುಂಬದಿರಲು ಕಾರಣವೇನು;

ಇ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ, ಇ) ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 610 ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು ಆಯ್ಕೆ ಪ್ರಕ್ರಿಯೆ ಪ್ರಾರಂಭವಾಗಿದೆ.

ಉಪನ್ಯಾಸಕರ ಕೊರತೆ ಇರುವ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿದೆ. ಅದಲ್ಲದೆ ಬೋಧಕೇತರ ಹುದ್ದೆಗಳನ್ನು ತುಂಬುವ ಕುರಿತಂತೆ ಸರ್ಕಾರದ ಮಿತವ್ಯಯ ಆದೇಶಗಳನ್ನು ಸಡಿಲಗೊಳಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.

2040 (2496) ಶ್ರೀ ಸಿದ್ದು ಸವದಿ (ಜಮಖಂಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ತಾಲ್ಲೂಕಿನಲ್ಲಿ ಅನೇಕ ಪ್ರೌಢ ಶಾಲೆಗಳಿಗೆ ಕೋಣೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗುವುದು;

ಇ) ನಬಾರ್ಡ್ ನೆರವಿನ ಹಣದಿಂದ ಕೋಣೆಗಳನ್ನು ಅವೈಜ್ಞಾನಿಕವಾಗಿ ಹಂಚಿಕೆ ಮಾಡಿದ್ದರಿಂದ ಕೆಲವು ಶಾಲೆಗಳಿಗೆ ಅನಾವಶ್ಯಕವಾಗಿ ಮಂಜೂರಾಗಿದ್ದು, ಕೆಲ ಶಾಲೆಗಳಿಗೆ ತೊಂದರೆಯಾಗಿರುವುದನ್ನು ಹೇಗೆ ಸರಿಪಡಿಸಲಾಗುವುದು;

ಈ) ಪ್ರೌಢಶಾಲೆಗಳಿಗೆ ಕುಡಿಯುವ ನೀರು, ಕಂಪೌಂಡ್, ಶೌಚಾಲಯದಂತಹ ಮೂಲಭೂತ ಸೌಲಭ್ಯಗಳ ಕೊರತೆ ಬಹಳಷ್ಟು ಇದ್ದು ಇದನ್ನು ಯಾವಾಗ ಮತ್ತು ಹೇಗೆ ಸರಿಪಡಿಸಲಾಗುವುದು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಆರ್.ಐ.ಡಿ.ಎಫ್–10 ರಡಿ 10 ಸರ್ಕಾರಿ ಪ್ರೌಢಶಾಲೆಗಳಿಗೆ ಒಟ್ಟು 33 ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ.
ಆರ್.ಐ.ಡಿ.ಎಫ್–12 ರಡಿ ನಾಲ್ಕು ಗ್ರಾಮಗಳ ಸರ್ಕಾರಿ ಪ್ರೌಢಶಾಲೆಗಳಿಗೆ ತಲಾ 5 ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ.
ಆದ್ಯತೆ ಮೇರೆಗೆ ಕೊಠಡಿಗಳ ನಿರ್ಮಾಣಕ್ಕೆ ಆರ್.ಐ.ಡಿ.ಎಫ್–13 ರಡಿಯೂ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) 2007–08 ನೇ ಸಾಲಿನ ಪಂಚ ಸೌಲಭ್ಯದಡಿ 860.00 ಲಕ್ಷ ರೂಗಳನ್ನು ಒದಗಿಸಲಾಗಿದ್ದು, ಅದರಲ್ಲಿ ಆದ್ಯತೆಯನ್ನು ಅನುಸರಿಸಿ, ಪ್ರೌಢಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಅನುದಾನದ ಲಭ್ಯತೆಯನ್ನು ಆಧರಿಸಿ ಕಾಂಪೌಂಡ್ ನಿರ್ಮಿಸಲು ಸಹ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

2041 (2491) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ) :– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ–ಸವಣೂರು ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯತಿಯ ಗ್ರಾಮ ಸಭೆಗಳಲ್ಲಿ ಮಂಜೂರಾದ 2006–07 ನೇ ಸಾಲಿನ ಆಶ್ರಯ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳನ್ನು ಜಾಗೃತಾ ಸಮಿತಿ ಅನುಮೋದನೆ ಪಡೆಯುವುದಕ್ಕಿಂತ ಪೂರ್ವದಲ್ಲಿಯೇ ಫಲಾನುಭವಿಗಳು ಕಟ್ಟಡ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

ಆ) ಬಾರದೇ ಇದ್ದಲ್ಲಿ, ಸಾಕಷ್ಟು ಗ್ರಾಮ ಪಂಚಾಯತಿಗಳಲ್ಲಿ ಖಾಲಿ ನಿವೇಶನ ಇಲ್ಲದೆ, ಮೊದಲೇ ನಿರ್ಮಾಣ ಮಾಡಿರುವ ಹಾಗೂ ಅರ್ಧ ಕಾಮಗಾರಿ ಆಗಿರುವಂತಹ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ;

ಇ) ಶಿಗ್ಗಾಂವ–ಸವಣೂರು ತಾಲ್ಲೂಕುಗಳಲ್ಲಿರುವ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು (ಗ್ರಾಮವಾರ ಮಾಹಿತಿ ಒದಗಿಸುವುದು);

ಈ) ಕೊಳಚೆ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ;